## ಕರ್ನಾಟಕ ಸರ್ಕಾರ

ಸಂ: ಗ್ರಾಅಪ 96 ಆರ್‌ಐ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 01.07.2020.

### ಅಧಿಕೃತ ಜ್ಞಾಪನ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದ ಈ ಕೆಳಕಂಡ ಕಾರ್ಯಕ್ರಮಗಳನ್ನು ಹೊಸದಾಗಿ ಸೃಜಿಸಲಾಗಿರುವ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಅನುಷ್ಠಾನಗೊಳಿಸಲು ಹಾಗೂ ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸ್ವ ಉದ್ಯೋಗ ಕಾರ್ಯಕ್ರಮ ಶಾಖೆಯಲ್ಲಿ ನಿರ್ವಹಿಸಲಾದ ಕಡತಗಳನ್ನು ಸಹ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಸ್ಥಳಾಂತರಿಸಲು ಆದೇಶಿಸಿದೆ:-

1. ರಾಷ್ಟ್ರೀಯ ಮ್ಯಾನ್ಯೂಯಲ್ ಸ್ಕ್ಯಾವೆಂಜರ್ ವಿಷಯ
2. ಜೀತದಾಳುಗಳ ನಿರ್ಮೂಲನೆ ಮತ್ತು ಪುನರ್ ವಸತಿ, ಜೀತಮುಕ್ತಿ ಯೋಜನೆ
3. ಐ.ಆರ್.ಇ.ಪಿ., ಬಯೋಗ್ಯಾಸ್ ಘಟಕ ಹಾಗೂ ಸಮಗ್ರ ಇಂಧನ ವಿಷಯ
4. ಡಿ.ಆರ್.ಡಿ.ಎ. ಆಡಳಿತ ವಿಷಯ
5. ಪಶ್ಚಿಮ ಘಟ್ಟಗಳ ಅಭಿವೃದ್ಧಿ ಯೋಜನೆ
6. ಜಿಲ್ಲಾ ಪಂಚಾಯತಿ ಕಟ್ಟಡಗಳ ನಿರ್ವಹಣೆ

ಮೇಲೆ ನಮೂದಿಸಿರುವ ಯೋಜನೆಗಳಿಗೆ ಸಂಬಂಧಿಸಿದಂತೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಪಡೆದಿರುವ ನೌಕರರುಗಳು ಇನ್ನು ಮುಂದೆ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಕೆಲಸ ನಿರ್ವಹಿಸತಕ್ಕದ್ದು. ಅವರುಗಳ ಸೇವಾ ಶುಲ್ಕವನ್ನು ಹಾಲಿ ಪಾವತಿಸಿರುವ ಲೆಕ್ಕಶೀರ್ಷಿಕೆ ಮತ್ತು ಸಂಸ್ಥೆಗಳ ಮೂಲಕ ಭರಿಸತಕ್ಕದ್ದು.

ಈ ಕೆಳಕಂಡ ಸಂಸ್ಥೆಗಳಿಗೆ ಸಂಬಂಧಿಸಿದ ವಿಷಯವನ್ನು ಸಂಬಂಧಿಸಿದ ಸಂಸ್ಥೆಗಳ ಮುಖ್ಯಸ್ಥರು ಕಡತಗಳನ್ನು ನೇರವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾ.), ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು :-

1. ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
2. ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

ಸಾಮಾಜಿಕ, ಆರ್ಥಿಕ ಮತ್ತು ಜಾತಿಗಣತಿ - 2011ರ ವಿಷಯವನ್ನು ನಿರ್ದೇಶಕರು ಗ್ರಾಮೀಣಾಭಿವೃದ್ಧಿ ಇವರಿಗೆ ಹಂಚಿಕೆ ಮಾಡಲಾಗಿದೆ. ಸದರಿ ವಿಷಯಕ್ಕೆ ಸಂಬಂಧಪಟ್ಟ ಕಡತಗಳನ್ನು ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಇವರಿಗೆ ಹಸ್ತಾಂತರಿಸುವುದು.

(ಸಿದ್ದೇಶ ಪೊತಲಕಟ್ಟಿ)
ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-1)
ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ/ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
2. ವ್ಯವಸ್ಥಾಪಕ ನಿರ್ದೇಶಕರು, ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಗ್ರಾಮೀಣ ಇಂಧನ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
4. ನಿರ್ದೇಶಕರು, ಗ್ರಾ.ಮೂ.ಸೌ-2, ಗ್ರಾಅಪಂ ರಾಜ್ ಇಲಾಖೆ.
5. ಇಲಾಖೆಯ ಎಲ್ಲಾ ನಿರ್ದೇಶಕರು/ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂರಾಜ್ ಇಲಾಖೆ.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಜಂಟಿ ಕಾರ್ಯದರ್ಶಿ (ಆ-2), ಗ್ರಾಅಪಂ ರಾಜ್ ಇಲಾಖೆ.
8. ಪ್ರಧಾನ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾ.), ಗ್ರಾಅಪಂ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.